Online Newspaper Clipping Service

**Dated, Wednesday 28th December – 2016**

THE HINDU

**Pg.No.04**

# Nadda open to holding NEET in Kannada

STAFF REPORTER

BENGALURU: Union Minister for Health and Family Welfare J.P. Nadda said here on Tuesday that the Union government was open to conducting the NEET exam in Kannada.

Speaking on the sidelines of the National Institute of Mental Health and Neurosciences (NIMHANS) convocation, he said, "Now that the government of Karnataka has asked for Kannada as a medium for the examination, the Union government is open to it. We respect the sentiments of the people of the State and believe in cooperative federalism," he said.

He added that a few stages had to be fulfilled by Karnataka, following which the Centre would consider the request.

The Minister said the Union government had sent a circular to all States on the medium of language and the problems they would face. "After suggestions were invited, a video conference was held during which the Karnataka government said that it would hold NEET in English. We acted according to their advice," he said.

**'No miscommunication'**

Mr. Nadda said the Karnataka government may have had an afterthought, considering the sentiments of the people, and stressed that it was not a case of miscommunication.

"There could not have been any miscommunication when we issued a circular, gave them a chance, and held a video conference where there was verbal confirmation," the Minister said.

" Now that Karnataka has asked for Kannada as a medium for the exam, the Centre is open to it. We respect the sentiments of the people of the State and believe in cooperative federalism



**J.P. Nadda,**
Union Minister for Health and Family Welfare

ವಿಜಯ ಕರ್ನಾಟಕ



## ಕೆಲ ಮಾರ್ಗಸೂಚಿಗೆ ರಾಜ್ಯ ಸರಕಾರ ಒಪ್ಪಿಗೆ ಸೂಚಿಸಬೇಕು: ಸಚಿವ ನಡ್ಡಾ

# ನೀಟ್ ಪರೀಕ್ಷೆಯಲ್ಲಿ ಕನ್ನಡಕ್ಕೂ ಪ್ರಾತಿನಿಧ್ಯ

**ವಿಕ ಸುದ್ದಿಲೋಕ** ಬೆಂಗಳೂರು

ವೃತ್ತಿಪರ ಕೋರ್ಸ್‌ಗಳಿಗೆ ನಡೆಯುವ ರಾಷ್ಟ್ರೀಯ ಅರ್ಹತಾ ಪರೀಕ್ಷೆ(ನೀಟ್)ಯಲ್ಲಿ ಕನ್ನಡ ಮಾಧ್ಯಮವನ್ನು ಪರಿಗಣಿಸಲು ಕೇಂದ್ರ ಸರಕಾರದಿಂದ ಸಕಾರಾತ್ಮಕ ಸ್ಪಂದನೆ ವ್ಯಕ್ತವಾಗಿದೆ.



ದೇಶದ ನಾನಾ ಪ್ರಾದೇಶಿಕ ಭಾಷೆಗಳಿಗೆ ಅವಕಾಶ ನೀಡಿ ಕನ್ನಡಕ್ಕೆ ಕೊಕ್ ನೀಡಿದ್ದ ಕ್ರಮದ ವಿರುದ್ಧ ಕನ್ನಡಿಗರು ಹಾಗೂ ಸರಕಾರ ವ್ಯಕ್ತಪಡಿಸಿದ ಆಕ್ಷೇಪಕ್ಕೆ ಪ್ರತಿಯಾಗಿ ಕೇಂದ್ರವು ನೀಟ್ ಪರೀಕ್ಷೆಯನ್ನು ಕನ್ನಡದಲ್ಲೇ ಬರೆಯಲು ಅವಕಾಶ ನೀಡಲು ತಾತ್ವಿಕ ಒಪ್ಪಿಗೆ ನೀಡಿದೆ. ಈ ವಿಚಾರದಲ್ಲಿ ರಾಜ್ಯದೊಂದಿಗೆ ಚರ್ಚಿಸಿ ಪರಿಹಾರ ಸೂತ್ರ ಕಂಡುಕೊಳ್ಳುವ ಅಭಯವನ್ನೂ ಕೇಂದ್ರ ನೀಡಿದೆ.

ನಗರದಲ್ಲಿ ಮಂಗಳವಾರ ನಡೆದ 'ನಿಮ್ಹಾನ್ಸ್' ಸಂಸ್ಥೆಯ ಘಟಿಕೋತ್ಸವದಲ್ಲಿ ಪಾಲ್ಗೊಂಡ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಚಿವ ಜೆ.ಪಿ.ನಡ್ಡಾ "ನೀಟ್ ಪರೀಕ್ಷೆಗೆ ಸಂಬಂಧಿಸಿದ ಕನ್ನಡ ಮಾಧ್ಯಮಕ್ಕೆ ಅವಕಾಶ ನೀಡಲು ಕೇಂದ್ರದ ಆಕ್ಷೇಪ ಇಲ್ಲ, ಈಗಾಗಲೇ ಅವಧಿ ಮುಗಿದಿದ್ದರೂ, ಸರಕಾರದ ಅಹವಾಲು ಆಧರಿಸಿ ಒಪ್ಪಿಗೆ ನೀಡಲಾಗುವುದು. ಆದರೆ, ಕೆಲ ಮಾರ್ಗಸೂಚಿಗೆ ರಾಜ್ಯ ಸರಕಾರ ಒಪ್ಪಿಗೆ ಸೂಚಿಸಬೇಕು," ಎಂದು ಸ್ಪಷ್ಟಪಡಿಸಿದರು.

"ಪ್ರಾದೇಶಿಕ ಭಾಷೆಗಳಲ್ಲಿ ಪರೀಕ್ಷೆ ಬರೆಯಲು ಮಾಧ್ಯಮ ಆಯ್ಕೆ ಕುರಿತು ಆಯಾ ರಾಜ್ಯಗಳಿಗೆ ಪ್ರಶ್ನಾವಳಿ ಕಳುಹಿಸಿ ಸಲಹೆ ಪಡೆಯಲಾಗಿತ್ತು. ಕರ್ನಾಟಕದಿಂದ ಇಂಗ್ಲಿಷ್ ಮಾಧ್ಯಮವೆಂದು ನಮೂದಾಗಿತ್ತು. ಇದನ್ನಾಧರಿಸಿ ಅಂತಿಮ ತೀರ್ಮಾನ ಕೈಗೊಂಡಿದ್ದನ್ನು ರಾಜ್ಯಕ್ಕೆ ಮಾರುತ್ತರ ಕಳುಹಿಸಲಾಗಿತ್ತು. ಈ ವಿಚಾರದಲ್ಲಿ ಕೇಂದ್ರಕ್ಕೆ ಯಾವುದೇ ಗೊಂದಲ ಇರಲಿಲ್ಲ, ನಂತರ ಬಂದಂತಹ ಅಹವಾಲನ್ನೂ ಪುರಸ್ಕರಿಸಿ ಕನ್ನಡಿಗರಿಗೆ ಒಳಿತು ಮಾಡುವ ನಿರ್ಧಾರ ಕೈಗೊಳ್ಳಲಾಗಿದೆ," ಎಂದರು.

**ಪರಿಹಾರ ಸಿಗಲಿದೆ:** ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಮಾತನಾಡಿ "ಕನ್ನಡದಲ್ಲಿ ಪರೀಕ್ಷೆ ಬರೆಯಲು ಅವಕಾಶ ಕೋರಿ ಇತ್ತೀಚೆಗೆ ಸಲ್ಲಿಸಿದ್ದ ಮನವಿಗೆ ಕೇಂದ್ರದಿಂದ ಸಕಾರಾತ್ಮಕ ಸ್ಪಂದನೆ ದೊರೆತಿದೆ. ಆದರೂ, ಅಧಿಕೃತ ಸಂದೇಶ ಸರಕಾರಕ್ಕೆ ತಲುಪಿಲ್ಲ, ಶೀಘ್ರವೇ ಸಮಸ್ಯೆ ಬಗೆಹರಿದು ನೀಟ್ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಕನ್ನಡ ಮಾಧ್ಯಮದಲ್ಲಿ ಬರೆಯುವ ಅವಕಾಶ ಒದಗಲಿದೆ," ಎಂದರು.

ಕೇಂದ್ರ ಹಾಗೂ ರಾಜ್ಯ ಸರಕಾರದ ಪ್ರಮುಖರ ಮಧ್ಯಪ್ರವೇಶದಿಂದಾಗಿ ವಿದ್ಯಾರ್ಥಿ ಸಮೂಹಕ್ಕೆ ಆಗಬಹುದಾಗಿದ್ದ ಅನಾಹುತ ತಪ್ಪಿದಂತಾಗಿದೆ. ಅಧಿಕಾರಿ ಮಟ್ಟದಲ್ಲಿ ಆಗಿದ್ದ ಸಮನ್ವಯ ಕೊರತೆಯಿಂದಾಗಿ ಇಂತಹ ಸನ್ನಿವೇಶ ಸೃಷ್ಟಿಯಾಗಿತ್ತು. ಇದೀಗ ಪ್ರತಿ ಹಂತದಲ್ಲಿ ಎಚ್ಚರಿಕೆ ವಹಿಸಲು ಸರಕಾರ ಅಧಿಕಾರಿ ವರ್ಗಕ್ಕೆ ಸೂಚಿಸಿದ್ದು, ಅಗತ್ಯ ಕ್ರಮ ವಹಿಸುವಂತೆ ಸೂಚಿಸಿದೆ.

### ಕನ್ನಡದಲ್ಲಿ ನೀಟ್: ಕೇಂದ್ರಕ್ಕೆ ಮುಖ್ಯಮಂತ್ರಿಯಿಂದ ಪತ್ರ

**ಬೆಂಗಳೂರು:** ವೈದ್ಯ ಪದವಿ ಕುರಿತ ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆಯನ್ನು (ನೀಟ್-ಯುಜಿ) ಕನ್ನಡ ಮಾಧ್ಯಮದಲ್ಲಿ ಬರೆಯಲು ಅವಕಾಶ ಕೋರಿ ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಅವರಿಗೆ ಸಿಎಂ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ.

ಇಂಗ್ಲಿಷ್ ಮತ್ತು ಹಿಂದಿಯೊಂದಿಗೆ ನಾನಾ ಪ್ರಾದೇಶಿಕ ಭಾಷಾ ಮಾಧ್ಯಮಗಳಲ್ಲೂ ನೀಟ್-ಯುಜಿ ಬರೆಯಲು ಅನುಮತಿ ನೀಡುತ್ತಿರುವುದು ಶ್ಲಾಘನೀಯ. ರಾಜ್ಯದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕನ್ನಡ ಮಾಧ್ಯಮದಲ್ಲೂ ಈ ಪರೀಕ್ಷೆ ಬರೆಯಲು ಅನುವು ಮಾಡಿಕೊಡಬೇಕು. ಈ ಸಂಬಂಧ ರಾಜ್ಯದ ಮುಖ್ಯ ಕಾರ್ಯದರ್ಶಿ ಹಾಗೂ ವೈದ್ಯ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ಅವರು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಕಾರ್ಯದರ್ಶಿ ಸಿ.ಕೆ. ಮಿಶ್ರಾ ಅವರಿಗೆ ಈಗಾಗಲೇ ಪತ್ರ ಬರೆದು ಗಮನ ಸೆಳೆದಿದ್ದಾರೆ.

ರಾಜ್ಯದಲ್ಲಿ ವೃತ್ತಿ ಶಿಕ್ಷಣ ಪ್ರವೇಶ ಸಂಬಂಧ ಸಿಇಟಿಯನ್ನು ಇಂಗ್ಲಿಷ್‌ನೊಂದಿಗೆ ಕನ್ನಡ ಮಾಧ್ಯಮದಲ್ಲೂ ನಡೆಸಲು ಈಗಾಗಲೇ ತೀರ್ಮಾನ ತೆಗೆದುಕೊಳ್ಳಲಾಗಿದೆ. ಹಾಗಾಗಿ ನೀಟ್-ಯುಜಿಯಲ್ಲಿ ಕನ್ನಡ ಮಾಧ್ಯಮ ಅಳವಡಿಸುವಂತೆ ಸಿಬಿಎಸ್‌ಇಗೆ ಅಗತ್ಯ ನಿರ್ದೇಶನ ಕೊಡಬೇಕು ಎಂದು ಕೇಂದ್ರ ಸಚಿವರಿಗೆ ಮಂಗಳವಾರ ಬರೆದಿರುವ ಪತ್ರದಲ್ಲಿ ಸಿಎಂ ವಿನಂತಿಸಿಕೊಂಡಿದ್ದಾರೆ.

ಪ್ರಜಾವಾಣಿ



### ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ನಡ್ಡಾ ಭರವಸೆ

# ಕನ್ನಡದಲ್ಲಿ ಎನ್‌ಇಇಟಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆಯನ್ನು (ಎನ್‌ಇಇಟಿ) ಕನ್ನಡ ಭಾಷೆಯಲ್ಲೂ ಬರೆಯುವುದಕ್ಕೆ ಅವಕಾಶ ಕಲ್ಪಿಸುವಂತೆ ಕೋರಿ ರಾಜ್ಯ ಸರ್ಕಾರವು ಕ್ರಮಬದ್ಧವಾಗಿ ಪ್ರಸ್ತಾವ ಸಲ್ಲಿಸಿದರೆ ಪರಿಗಣಿಸುತ್ತೇವೆ' ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ತಿಳಿಸಿದರು.

ಮಂಗಳವಾರ, ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಗಳ ಸಂಸ್ಥೆಯ ಘಟಿಕೋತ್ಸವದಲ್ಲಿ ಭಾಗವಹಿಸಿದ ಅವರು ಸುದ್ದಿಗಾರರ ಜೊತೆ ಮಾತನಾಡಿದರು.

'ಪ್ರಾದೇಶಿಕ ಭಾಷೆಗಳಲ್ಲಿ ಎನ್‌ಇಇಟಿ ಬರೆಯಲು ಅವಕಾಶ ಕಲ್ಪಿಸುವ ಬಗ್ಗೆ ಹಾಗೂ ಸೀಟು ಹಂಚಿಕೆ ವೇಳೆ ಮೀಸಲಾತಿ ಕಲ್ಪಿಸುವ ಬಗ್ಗೆ ರಾಜ್ಯ ಸರ್ಕಾರಗಳಿಗೆ ಪತ್ರ ಬರೆದು ಅಭಿಪ್ರಾಯ ಕೇಳಿದ್ದೆವು. ಈ ಕುರಿತು ವಿಡಿಯೊ ಸಂವಾದ ಹಮ್ಮಿಕೊಂಡಾಗಲೂ ಕನ್ನಡ ಭಾಷೆಯಲ್ಲಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸುವಂತೆ ಕರ್ನಾಟಕ ಕೋರಿರಲಿಲ್ಲ' ಎಂದು ಅವರು ತಿಳಿಸಿದರು.

> **ಕೇಂದ್ರ ಆರೋಗ್ಯ ಸಚಿವರು ಕನ್ನಡದಲ್ಲೂ ಎನ್‌ಇಇಟಿ ಬರೆಯಲು ಅವಕಾಶ ನೀಡುವುದಾಗಿ ಹೇಳಿದ್ದಾರೆ. ಪರೀಕ್ಷೆ ನಡೆಯಲು ಇನ್ನೂ ಕಾಲಾವಕಾಶ ಇದೆ. ಹಾಗಾಗಿ ಗೊಂದಲ ಬಗೆಹರಿಸುವ ವಿಶ್ವಾಸ ಇದೆ**
>
> **ಡಾ.ಶರಣಪ್ರಕಾಶ ಪಾಟೀಲ**
>
> ವೈದ್ಯಕೀಯ ಶಿಕ್ಷಣ ಸಚಿವ

'ಸಮಸ್ಯೆ ಸೃಷ್ಟಿಗೆ ನಾವು ಕಾರಣರಲ್ಲ. ಕನ್ನಡ ಭಾಷೆಯಲ್ಲಿ ಪರೀಕ್ಷೆ ಬರೆಯಲು ಅವಕಾಶ ನೀಡದ ಬಗ್ಗೆ ಜನರಿಂದ ವಿರೋಧ ವ್ಯಕ್ತವಾದ ಬಳಿಕ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿದೆ. ಎಲ್ಲ ರಾಜ್ಯಗಳ ಜನರ ಭಾವನೆಯನ್ನು ನಾವು ಗೌರವಿಸುತ್ತೇವೆ. ಈಗಲೂ ಕಾಲ ಮಿಂಚಿಲ್ಲ. ಅಗತ್ಯ ಪೂರ್ವ ಸಿದ್ಧತೆ ಮಾಡಿಕೊಂಡು ಪ್ರಸ್ತಾವನೆ ಸಲ್ಲಿಸಲಿ' ಎಂದರು

## 2017ರಲ್ಲಿ ಕನ್ನಡದಲ್ಲಿ ಸಿಇಟಿ

ಬೆಂಗಳೂರು: ರಾಜ್ಯದಲ್ಲಿ 2017ರಲ್ಲಿ ನಡೆಯುವ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು (ಸಿಇಟಿ) ಕನ್ನಡದಲ್ಲಿ ಬರೆಯಲು ಅವಕಾಶ ನೀಡಲು ನಿರ್ಧರಿಸಲಾಗಿದೆ.

ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆಯನ್ನೂ (ಎನ್‌ಇಇಟಿ) ಕನ್ನಡದಲ್ಲಿ ಬರೆಯಲು ಅವಕಾಶ ನೀಡಬೇಕು ಎಂದು ಒತ್ತಾಯಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರಕ್ಕೆ ಪತ್ರ ಬರೆದಿದ್ದಾರೆ.

ರಾಜ್ಯದ ವಿದ್ಯಾರ್ಥಿಗಳು ಕನ್ನಡದಲ್ಲಿ 'ನೀಟ್' ಪರೀಕ್ಷೆ ಬರೆಯಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸಿಬಿಎಸ್‌ಸಿಗೆ ಸೂಕ್ತ ನಿರ್ದೇಶನ ನೀಡಬೇಕು ಎಂದು ಅವರು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ಅವರಿಗೆ ಬರೆದಿರುವ ಪತ್ರದಲ್ಲಿ ಒತ್ತಾಯಿಸಿದ್ದಾರೆ.

ಕೇಂದ್ರ ಆರೋಗ್ಯ ಇಲಾಖೆಯು 2017ರಲ್ಲಿ 'ನೀಟ್' ಪರೀಕ್ಷೆಯನ್ನು ಇಂಗ್ಲಿಷ್ ಮತ್ತು ಹಿಂದಿಯಲ್ಲದೆ, ಇತರ ಪ್ರಾದೇಶಿಕ ಭಾಷೆಗಳಲ್ಲೂ ನಡೆಸಲು ತೀರ್ಮಾನಿಸಿದೆ ಎಂದು ಗೊತ್ತಾಗಿದೆ. ಕನ್ನಡದ ವಿದ್ಯಾರ್ಥಿಗಳಿಗೆ ಕನ್ನಡ ಭಾಷೆಯಲ್ಲಿ ಬರೆಯಲು ಅವಕಾಶ ಕಲ್ಪಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ವಿವಿಧ ಭಾರತೀಯ ಭಾಷೆಗಳಲ್ಲಿ 'ನೀಟ್' ಪರೀಕ್ಷೆ ಬರೆಯಲು ಅವಕಾಶ ನೀಡಿರುವ ಕ್ರಮ ಸ್ವಾಗತಾರ್ಹ. ಇದರಿಂದ ಸ್ಥಳೀಯ ಭಾಷೆಯಲ್ಲಿ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಇಂಗ್ಲಿಷ್ ವಿದ್ಯಾರ್ಥಿಗಳಿಗೆ ಸರಿಸಮಾನವಾಗಿ ಪೈಪೋಟಿ ನೀಡಬಹುದಾಗಿದೆ' ಎಂದರು.

ಉದಯವಾಣಿ



# ಕನ್ನಡದಲ್ಲಿ ನೀಟ್ ಬೇಕಾ? ಪ್ರಸ್ತಾವ ಕೊಡಿ: ನಡ್ಡಾ

## ■ ರಾಜ್ಯವೇ ಇಂಗ್ಲಿಷ್ ಆಯ್ದುಕೊಂಡಿತ್ತು ■ ಈಗ ಕೇಂದ್ರವನ್ನು ದೂರುತ್ತಿದೆ

ಬೆಂಗಳೂರು: ವೈದ್ಯಕೀಯ ಪ್ರವೇಶಕ್ಕೆ ನಡೆಸಲಾಗುವ ನೀಟ್ ಪರೀಕ್ಷೆಯನ್ನು ಕನ್ನಡದಲ್ಲಿ ಬರೆಯಲು ಅವಕಾಶ ಕಲ್ಪಿಸುವಂತೆ ರಾಜ್ಯ ಸರ್ಕಾರ ಈಗಲೂ ಕ್ರಮಬದ್ಧವಾಗಿ ಪ್ರಸ್ತಾವನೆ ಸಲ್ಲಿಕೆ ಮಾಡಿದರೆ ಅದನ್ನು ಪರಿಗಣಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಆಶ್ವಾಸನೆ ನೀಡಿದ್ದಾರೆ.

ಮಂಗಳವಾರ ನಡೆದ ನಿಮ್ಹಾನ್ಸ್ ಸಂಸ್ಥೆಯ ಘಟಿಕೋತ್ಸವ ಸಮಾರಂಭ ಬಳಿಕ ಸುದ್ದಿಗಾರರ ಜತೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ಕಳುಹಿಸಿದ್ದ ಸುತ್ತೋಲೆಯಲ್ಲಿ ಹಾಗೂ ವಿಡಿಯೋ ಕಾನ್ಫರೆನ್ಸ್ ವೇಳೆ ಆಂಗ್ಲ ಭಾಷೆಯ ನೀಟ್ ಪರೀಕ್ಷೆಯನ್ನು ರಾಜ್ಯ ಸರ್ಕಾರ ಆಯ್ಕೆ ಮಾಡಿಕೊಂಡಿತ್ತು. ಇದೀಗ ಪರೀಕ್ಷೆಗೆ ಅಂತಿಮ ಸುತ್ತೋಲೆ ಹೊರಡಿಸಲಾಗಿದೆ. ರಾಜ್ಯದಲ್ಲಿ ವಿರೋಧ ವ್ಯಕ್ತವಾದ ಬಳಿಕ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿದೆ. ದೇಶದ ಎಲ್ಲಾ ರಾಜ್ಯಗಳ ಜನರ ಭಾವನೆಯನ್ನು ನಾವು ಗೌರವಿಸುತ್ತೇವೆ. ಈಗಲೂ ಪೂರ್ವ ಸಿದ್ಧತೆಗಳನ್ನು ಕೈಗೊಂಡು ಪ್ರಸ್ತಾವನೆ ಸಲ್ಲಿಸಲಿ. ತಡವಾದರೂ ಸಹ ರಾಜ್ಯ ಸರ್ಕಾರ ಕ್ರಮಬದ್ಧವಾಗಿ ಪ್ರಸ್ತಾವನೆ ಸಲ್ಲಿಸಿದರೆ ಅದನ್ನು ಪರಿಗಣಿಸಲಾಗುವುದು ಎಂದರು.



ನಿಮ್ಹಾನ್ಸ್ ಘಟಿಕೋತ್ಸವದಲ್ಲಿ ನಡ್ಡಾ, ಅನಂತಕುಮಾರ್, ಶರಣಪ್ರಕಾಶ್ ಪಾಟೀಲ್.

ಪ್ರಾದೇಶಿಕ ಭಾಷೆಯಲ್ಲಿ ನೀಟ್ ಪರೀಕ್ಷೆಗೆ ಅವಕಾಶ ಕಲ್ಪಿಸುವ ಸಂಬಂಧ ಕೇಂದ್ರ ಸರ್ಕಾರವು ರಾಜ್ಯದ ಅಭಿಪ್ರಾಯ ಕೇಳಿತ್ತು. ರಾಜ್ಯ ಸರ್ಕಾರ ವಿಡಿಯೋ ಕಾನ್ಫರೆನ್ಸ್ ವೇಳೆಯೂ ಕನ್ನಡದಲ್ಲಿ ಅವಕಾಶ ಕಲ್ಪಿಸುವಂತೆ ಕೋರಿರಲಿಲ್ಲ, ಪರೀಕ್ಷೆಯ ಗೊಂದಲಕ್ಕೆ ರಾಜ್ಯ ಸರ್ಕಾರವೇ ನೇರ ಹೊಣೆಯಾಗಿದೆ. ಕೇಂದ್ರ ಸರ್ಕಾರವು ರಾಜ್ಯ ಸರ್ಕಾರದ ಒಪ್ಪಿಗೆಯ ಮೇರೆಗೆ ನಿರ್ಧಾರ ತೆಗೆದುಕೊಂಡಿದೆ. ಆದರೂ ರಾಜ್ಯ ಸರ್ಕಾರ ನೀಟ್ ವಿಚಾರ ಸಂಬಂಧ ಭಾಷೆಯ ಆಯ್ಕೆಯ ಬಗ್ಗೆ ನಮಗೆ ಮಾಹಿತಿಯೇ ತಿಳಿದಿರಲಿಲ್ಲ, ಮಾತುಕತೆ ನಡೆಸಿದಲಿಲ್ಲ, ಎಂದು ಕೇಂದ್ರ ಸರ್ಕಾರದತ್ತ ಬೊಟ್ಟು ಮಾಡುತ್ತಿದೆ ಎಂದು ದೂರಿದರು.

ಇದಕ್ಕೂ ಮುನ್ನ ಕಾರ್ಯಕ್ರಮದಲ್ಲಿ ಮಾತನಾಡಿದ ಜೆ.ಪಿ.ನಡ್ಡಾ ವಿಶ್ವಸಂಸ್ಥೆ ಅಭಿವೃದ್ಧಿ ಗುರಿಯನುಸಾರ 2030ರೊಳಗೆ ಭಾರತದಲ್ಲಿ ನರಸಮಸ್ಯೆ, ಮಾನಸಿಕ ಆರೋಗ್ಯ, ರಸ್ತೆ ಅಪಘಾತವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ವತಿಯಿಂದ ಅನೇಕ ಯೋಜನೆಗಳನ್ನು ಜಾರಿಗೊಳಿಸಲಾಗುವುದು ಎಂದರು. ವೈದ್ಯಕೀಯ ಶಿಕ್ಷಣ ಸಚಿವ ಶರಣ್ ಪ್ರಕಾಶ್ ಪಾಟೀಲ್, ಕೇಂದ್ರ ಸಚಿವ ಅನಂತ್ ಕುಮಾರ್, ಇಸ್ರೋ ಅಧ್ಯಕ್ಷ ಡಾ.ಎ.ಎಸ್. ಕಿರಣ್ ಕುಮಾರ್ ಇತರರು ಉಪಸ್ಥಿತರಿದ್ದರು.

ಘಟಿಕೋತ್ಸವದಲ್ಲಿ 168 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.